ಕನ್ನಡ ಚಿತ್ರಗಳಿಗೆ ಸಹಾಯ ಧನ

844 - ಶ್ರೀ ವಾಟಾಳ್ ನಾಗರಾಜ್ (ಚಾಮರಾಜನಗರ) : ಮಾನ್ಯ ಕಾನೂನು ವಾರ್ತಾ ಮತ್ತು ಪ್ರಚಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕನ್ನಡ ಚಿತ್ರಗಳಿಗೆ ಸಹಾಯ ಧನವನ್ನು ಎಂದಿನಿಂದ ನೀಡಲಾಗುತ್ತಿದೆ?

ಆ) ಕನ್ನಡ ಚಿತ್ರಗಳಿಗೆ ಸಹಾಯ ಧನ ಕೋರಿ ಇದುವರೆಗೆ ಎಷ್ಟು ಮನವಿಗಳು ಬಂದಿವೆ?

ಇ) ವಾರ್ತಾ ಇಲಾಖೆಯನ್ನು ನವೀಕರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಶ್ರೀ ಎಂ.ಸಿ. ನಾಣಯ್ಯ (ವಾರ್ತಾ ಮತ್ತು ಪ್ರಚಾರ ಸಚಿವರು) :

ಅ) ಕನ್ನಡ ಚಿತ್ರಗಳಿಗೆ 1966-67ನೇ ಸಾಲಿನಿಂದ ಸಹಾಯಧನ ನೀಡಲಾಗುತ್ತಿದೆ.

ಆ) 1.4.89 ರಿಂದ 31.3.98ರ ವರೆಗೆ 612 ಅರ್ಜಿಗಳು ಬಂದಿರುತ್ತದೆ.

ಇ) ವಾರ್ತಾ ಮತ್ತು ಪ್ರಚಾರ ಇಲಾಖೆಯನ್ನು ನವೀಕರಣಗೊಳಿಸಲು ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿದೆ.

1. ಗಣಕೀಕರಣ :

10 ಗಣಕ ಯಂತ್ರಗಳನ್ನು ಸ್ಥಾಪಿಸಲಾಗಿದೆ. ಸರ್ಕಾರದ ಅಭಿವೃದ್ಧಿ ಕಾರ್ಯಗಳು ಹಾಗೂ ವಿವಿಧ ಕ್ಷೇತ್ರಗಳ ವಿಷಯಗಳನ್ನೊಳಗೊಂಡ ಮಾಹಿತಿಯನ್ನು ಸಂಗ್ರಹಿಸಿಡಲಾಗುತ್ತಿದೆ.

2. ಕನ್ನಡ ವಾರ್ತಾ ಜಾಲ :

ಪ್ರಥಮ ಹಂತವಾಗಿ ರಾಜ್ಯದಲ್ಲಿ 12 ವಿವಿಧ ಜಿಲ್ಲಾ ಕೇಂದ್ರಗಳಲ್ಲಿ ಕನ್ನಡ ಸುದ್ದಿ ಮಾಧ್ಯಮಗಳ ಸ್ವೀಕೃತಿ ಘಟಕಗಳನ್ನು ಅಳವಡಿಸಲು ಕ್ರಮ ಕೈಗೊಳ್ಳಲಾಗಿದೆ.

3. ವಿಡಿಯೋ ಕ್ಯಾಮರಾಗಳ ಘಟಕಗಳು :

ಧಾರವಾಡ, ಮಂಗಳೂರು ಹಾಗೂ ಗುಲ್ಬರ್ಗಾ ಜಿಲ್ಲೆಗಳಲ್ಲಿ ಹೆಚ್ಚುವರಿ ವಿಡಿಯೋ ಘಟಕಗಳನ್ನು ಸ್ಥಾಪಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

ರಾಜ್ಯದಲ್ಲಿನ ಲೋಕೋಪಯೋಗಿ ಇಲಾಖೆಯ ರಸ್ತೆಗಳ ರಿಪೇರಿ

846 - ಶ್ರೀ ವಸಂತ ವಿ. ಸಾಲಿಯಾನ (ಕಾಪು) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿನ ಲೋಕೋಪಯೋಗಿ ಇಲಾಖಾ ರಸ್ತೆಗಳನ್ನು ರಿಪೇರಿ ಮಾಡಿ, ನಿರ್ವಹಿಸಿಕೊಂಡು ಬರಲು 1995-96, 1996-97 ಹಾಗೂ 1997-98ನೇ ಸಾಲಿಗೆ ಬಿಡುಗಡೆ ಮಾಡಿರುವ ಹಣವೆಷ್ಟು?

ಆ) ಬಿಡುಗಡೆ ಮಾಡಿದ ಹಣದಲ್ಲಿ ಖರ್ಚು ಮಾಡಿದ ಹಣವೆಷ್ಟು? ಮತ್ತು ಎಷ್ಟು ರಸ್ತೆಗಳನ್ನು ಸುಸ್ಥಿತಿಯಲ್ಲಿಡಲಾಗಿದೆ?

ಶ್ರೀ ಸಿ.ಎಂ. ಉದಾಸಿ (ಲೋಕೋಪಯೋಗಿ ಸಚಿವರು) :

ಅ) ರಾಜ್ಯದಲ್ಲಿನ ಲೋಕೋಪಯೋಗಿ ಇಲಾಖೆ ನಿರ್ವಹಣೆ ಮತ್ತು ದುರಸ್ತಿಗಾಗಿ ಬಿಡುಗಡೆ ಮಾಡಲಾದ ಹಣ.

1995-96	-	61.02 ಕೋಟಿ ರೂ.ಗಳು
1996-97	-	77.52 ಕೋಟಿ ರೂ.ಗಳು
1997-98	-	93.00 ಕೋಟಿ ರೂ.ಗಳು

ಆ) ಬಿಡುಗಡೆಯಾದ ಹಣದಲ್ಲಿ ವೆಚ್ಚ ಮಾಡಿದ ವಿವರ ಕೆಳಕಂಡಂತಿದೆ :

1995-96	-	65.09
1996-97	-	77.42
1997-98	-	75.18

ಎಲ್ಲಾ ರಸ್ತೆಗಳನ್ನು ಸಂಚಾರಕ್ಕೆ ಯೋಗ್ಯವಾಗಿಡಲಾಗಿದೆ.

ಲೋಕೋಪಯೋಗಿ ಇಲಾಖಾ ಮತಿಯಿಂದ ಎಂ.ಎಲ್.ಎ ಗ್ರಾಂಟ್‌ಗೆ ಮಂಜೂರಾದ ಹಣ

847 - ಶ್ರೀ ವಸಂತ ವಿ. ಸಾಲಿಯಾನ (ಕಾಪು) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಲೋಕೋಪಯೋಗಿ ಇಲಾಖಾ ಮತಿಯಿಂದ ವಿಧಾನ ಸಭಾ ಸದಸ್ಯರ ಸ್ಥಳೀಯಾಡಳಿತ (ಎಂ.ಎಲ್.ಎ ಗ್ರಾಂಟ್) ಅಭಿವೃದ್ಧಿಗಾಗಿ ನೀಡಲಾಗುವ 30.00 ಲಕ್ಷ ರೂ.ಗಳ ಮೊತ್ತದಲ್ಲಿ 1995-96, 1996-97 ಮತ್ತು 1997-98ನೇ ಸಾಲಿನಲ್ಲಿ ಎಷ್ಟು ಕಾಮಗಾರಿಗಳಿಗೆ ಮಂಜೂರಾತಿ ನೀಡಲಾಗಿದೆ?

ಆ) ಮಂಜೂರಾತಿ ನೀಡಲಾದ ಕಾಮಗಾರಿಗಳಲ್ಲಿ ಕೈಗೆತ್ತಿಕೊಂಡು ಸಂಪೂರ್ಣಗೊಳಿಸಲಾದ ಕಾಮಗಾರಿಗಳೆಷ್ಟು?

ಇ) ಮಂಜೂರಾತಿ ನೀಡಿದ್ದರೂ ಕೆಲವು ಕಾಮಗಾರಿಗಳು ಅಪೂರ್ಣವಾಗಿರಲು ಕಾರಣವೇನು? ಇವುಗಳನ್ನು ಯಾವಾಗ ಸಂಪೂರ್ಣಗೊಳಿಸಲಾಗುವುದು?

ಈ) ಎಲ್ಲಾ 224 ಮತ ಕ್ಷೇತ್ರಗಳಿಗೆ ಬಿಡುಗಡೆ ಮಾಡಿದ ಒಟ್ಟು ಹಣವೆಷ್ಟು?

ಶ್ರೀ ಸಿ.ಎಂ. ಉದಾಸಿ (ಲೋಕೋಪಯೋಗಿ ಸಚಿವರು) :

ಅ) ಲೋಕೋಪಯೋಗಿ ಇಲಾಖೆ ವಿಧಾನ ಸಭೆ ಮತ ಕ್ಷೇತ್ರಗಳಲ್ಲಿ ಈ ಮೂರು ವರ್ಷಗಳಲ್ಲಿ ಒಟ್ಟಿಗೆ 1258 ಕಾಮಗಾರಿಗಳಿಗೆ ಮಂಜೂರಾತಿ ನೀಡಲಾಗಿದೆ. ಇದರಲ್ಲಿ ಬೀದರಿನಲ್ಲಿ 1 ಕಾಮಗಾರಿಯನ್ನು ಸದ್ಯಕ್ಕೆ ಕೈಬಿಡಲಾಗಿದೆ.